ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ದಿನಾಂಕ: 03–05–2020**

## ಪತ್ರಿಕಾ ಪ್ರಕಟಣೆ

# ಸಾಹಿತಿ ಕೆ.ಎಸ್. ನಿಸಾರ್ ಅಹಮದ್ ನಿಧನಕ್ಕೆ ಮುಖ್ಯಮಂತ್ರಿಗಳ ಸಂತಾಪ

ಬೆಂಗಳೂರು, 03 ಮೇ 2020 (ಕರ್ನಾಟಕ ವಾರ್ತೆ):

ಕನ್ನಡದ ಹಿರಿಯ ಸಾಹಿತಿ, ಕವಿ ಕೆ.ಎಸ್. ನಿಸಾರ್ ಅಹಮದ್ ಅವರ ನಿಧನಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಅತ್ಯುತ್ತಮ ಸಾಹಿತ್ಯ ಸಂಕಲನಗಳನ್ನು ಕನ್ನಡಕ್ಕೆ ನೀಡಿದ ಅವರು, ನಿತ್ಯೋತ್ಸವ ಕವಿ ಎಂದೇ ಪ್ರಖ್ಯಾತಿ ಪಡೆದು ಕನ್ನಡಿಗರ ಮನೆಮಾತಾಗಿದ್ದರು. ಶಿವಮೊಗ್ಗದಲ್ಲಿ ಕೆಲವು ವರ್ಷಗಳ ಕಾಲ ಕಾರ್ಯ ನಿರ್ವಹಿಸಿದ್ದರು ಹಾಗೂ ವಿಶೇಷ ಬಾಂಧವ್ಯ ಹೊಂದಿದ್ದರು.

2007 ರಲ್ಲಿ ಶಿವಮೊಗ್ಗದಲ್ಲಿ ನಡೆದ 73 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ದ್ದವರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪದ್ಮಶ್ರೀ, ಪಂಪ ಪ್ರಶಸ್ತಿ ಸೇರಿದಂತೆ ಅನೇಕ ಪ್ರಶಸ್ತಿ ಗೆ ಭಾಜನರಾಗಿದ್ದ ಅವರು ಕನ್ನಡದ ಎಲ್ಲ ಪ್ರಾಕಾರಗಳನ್ನು ಶ್ರೀಮಂತಗೊಳಿಸಿದ್ದರು.

ಅವರ ನಿಧನದಿಂದ ಕನ್ನಡ ಸಾರಸ್ವತ ಲೋಕದ ಕೊಂಡಿಯೊಂದು ಕಳಚಿಬಿದ್ದಂತಾಗಿದೆ. ಅವರ ಆತ್ಮಕ್ಕೆ ಭಗವಂತ ಶಾಂತಿ ನೀಡಲಿ. ಅವರ ಕುಟುಂಬದವರಿಗೆ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಮುಖ್ಯಮಂತ್ರಿಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# CM condoles death of K.S.Nisar Ahmed

Bengaluru, May 03 (Karnataka Information): Chief Minister B.S.Yediyurappa has condoled the death of Kannada writer and poet K.S.Nisar Ahmed.

Expressing deep sense of sorrow over his death , the Chief Minister noted that Nisar Ahmed contributed some of the best works in all genres of Kannada literature. He has won many accolades including Padmashri, Karnataka Sahitya Award and Pampa Award . He had special bonding with Shivamogga as he worked there for some years He was also the President of the 73rd Kannada Sahithya Sammelana held in Shivamogga.

The Chief Minister described Nisar Ahmed's death as an "irreparable loss" to the State and Kannada literary world.

May his soul rest in peace and may God give the strength to his bereaved family to bear this loss, the Chief Minister said in his condolence message.

# ನಿಸಾರ್ ಅಹಮ್ಮದ್ ನಿಧನಕ್ಕೆ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರ ಸಂತಾಪ

ಬೆಂಗಳೂರು, 03 ಮೇ 2020 (ಕರ್ನಾಟಕ ವಾರ್ತೆ):

ಕನ್ನಡದ ಪ್ರಖ್ಯಾತ ಕವಿ ನಿಸಾರ್ ಅಹಮದ್ ಅವರ ನಿಧನಕ್ಕೆ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಎಂ ಎನ್ ನಂದೀಶ್ ಹಂಚೆ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ .

"ಕೊನೆಯಾಯಿತು ಕನ್ನಡದ ಕಾವ್ಯ ಉತ್ಸವ" ಎಂದು ಅವರ ಅಗಲಿಕೆಯ ನೋವನ್ನು ತೋಡಿಕೊಂಡಿರುವ ನಂದೀಶ್ ಹಂಚೆ ಅವರು ,ನಿಸಾರ್ ಅಹಮದ್ ಅವರು ಈ ಶತಮಾನ ಕಂಡ ಶ್ರೇಷ್ಠ ಕವಿ ಎಂದು ಬಣ್ಣಿಸಿದ್ದಾರೆ .

ಪದ್ಮಶ್ರೀ, ನಾಡೋಜ ,ಪಂಪ ಪ್ರಶಸ್ತಿ, ಅನ ಕೃಷ್ಣರಾಯ ಪ್ರಶಸ್ತಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಹೀಗೆ ಸಾಲು ಸಾಲು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದ ನಿಸಾರ್ ಅಹಮದ್ ನಿತ್ಯೋತ್ಸವ ಕವಿ ಎಂದೇ ಪ್ರಸಿದ್ಧರಾಗಿದ್ದರು .

ಅಧ್ಯಾಪಕರಾಗಿ ಅಪಾರ ಸಂಖ್ಯೆಯ ಶಿಷ್ಯರನ್ನು ಗಳಿಸಿದ್ದ ನಿಸಾರ್ ಅಹಮ್ಮದ್ ಅವರು ಎಲ್ಲ ಸಾಹಿತ್ಯಕ ಚಳವಳಿಗಳಲ್ಲಿ, ಚರ್ಚೆಗಳಲ್ಲಿ ಸದಾ ಸಕ್ರಿಯವಾಗಿದ್ದರು .

ಇಳಿ ವಯಸ್ಸಿನಲ್ಲಿಯೂ ಸಾಹಿತ್ಯಿಕ ಕಾರ್ಯಕ್ರಮಗಳನ್ನು ತಪ್ಪಿಸಿಕೊಂಡವರಲ್ಲ .ಜಲಪಾತ, ಮನಸ್ಸು ಗಾಂಧಿ ಬಜಾರು ,ನಿತ್ಯೋತ್ಸವ ,ಸಂಜೆ ಐದರ ಮಳೆ ಮುಂತಾದ ಅವರ ಕವನ ಸಂಕಲನಗಳು ಕನ್ನಡ ಸಾಹಿತ್ಯಕ್ಕೆ ಸಂದ ಅಪೂರ್ವ, ಅನನ್ಯ ಕವಿತೆಗಳು ಎಂಬುದು ನಿರ್ವಿವಾದ .

ಎ ಮಿಡ್ ಸಮ್ಮರ್ ನೈಟ್ಸ್ ಹಾಗೂ ಒಥೆಲೊ ಅಂತಹ ಶ್ರೇಷ್ಠ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿದ್ದು ಅವರ ಮಹತ್ವದ ಕೊಡುಗೆ ಎಂಬುದು ನಿಸ್ಸಂಶಯ .

ನಿಸಾರ್ ಅಹಮದ್ ಅವರ ನಿಧನದಿಂದ ಕನ್ನಡ ಸಾಹಿತ್ಯ ಲೋಕ ಬೆಳಕಿನ ಸಿರಿ ಯೊಂದನ್ನು ಕಳೆದುಕೊಂಡಂತಾಗಿದೆ ಎಂದು ನಂದೀಶ್ ಹಂಚೆ ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ .

## ಮರೆಯಾದ ನಿತ್ಯೋತ್ಸವ ಕವಿಗೆ ಕೃಷಿಸಚಿವರ ಕಂಬನಿ

ಬೆಂಗಳೂರು, 03 ಮೇ 2020 (ಕರ್ನಾಟಕ ವಾರ್ತೆ):

"ಕುರಿಗಳು ಸಾರ್ ॥
ಸಾಗಿದ್ದೇ ಗುರಿಗಳು
ಮಂದೆಯಲ್ಲಿ ಒಂದಾಗಿ ಸ್ವಂತತೆಯೇ ಬಂದಾಗಿ
ಅದರ ಬಾಲ ಇದು ಮತ್ತೆ ಇದರ ಬಾಲ ಅದು ಮೂಸಿ
ದನಿ ಕುಗ್ಗಿಸಿ ತಲೆ ತಗ್ಗಿಸಿ ಅಂಡಲೆಯುವ ನಾವು ನೀವು"

"ಜೋಗದ ಸಿರಿ ಬೆಳಕಿನಲ್ಲಿ" ಎಂದು ನಿತ್ಯೋತ್ಸವನ್ನು ಸಾಹಿತ್ಯದ ಮೂಲಕ ಹರಸಿ ನಾಡಿನ ಮನಮನೆಗಳಲ್ಲಿ ನೆಲೆಸಿದ್ದ ನಿತ್ಯೋತ್ಸವ ಕವಿ ಡಾ.ನಿಸಾರ್ ಅಹಮದ್ ಅವರ ನಿಧನ ಕನ್ನಡ ಸಾರಸ್ವತ ಸಾಹಿತ್ಯ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ. ನಿಸರ್ಗದ ರಮಣೀಯತೆಯನ್ನು ಸ್ವಚ್ಛ ಕನ್ನಡದಲ್ಲಿ ವರ್ಣಿಸುವ ಮೂಲಕ ಪ್ರಕೃತಿಯ ಸೌಂದರ್ಯವನ್ನು ಉಣಬಡಿಸಿದ್ದ ಸಾಹಿತ್ಯ ಶ್ರೇಷ್ಠರ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ಅವರ ಕುಟುಂಬಕ್ಕೂ,ಸ್ನೇಹಿತರಿಗೂ,ಸಾಹಿತ್ಯಾಸಕ್ತರಿಗೂ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ಅವರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

## ನಿತ್ಯೋತ್ಸವದ ಕವಿ ನಿಸ್ಸಾರ ಅಹಮ್ಮದ ನಿಧನ: ಸಚಿವ ಸಿ.ಸಿ.ಪಾಟೀಲ ಸಂತಾಪ

ಬೆಂಗಳೂರು, 03 ಮೇ 2020 (ಕರ್ನಾಟಕ ವಾರ್ತೆ):

ಕನ್ನಡ ನಾಡಿನ ನಿತ್ಯೋತ್ಸವ ಅಜರಾಮರ ಗೀತೆಯ ಮೂಲಕ ನಾಡ ಸಂಸ್ಕೃತಿ,ಪರಿಸರ ಕುರಿತು ಜನರಿಗೆ ಅಭಿಮಾನ ಮೂಡಿಸಿದ್ದ ಕವಿ ಕೆ.ಎಸ್. ನಿಸ್ಸಾರ ಅಹಮ್ಮದ ಅವರ ನಿಧನದಿಂದಾಗಿ ಕನ್ನಡ ಸಾಹಿತ್ಯ ಲೋಕ ಬಡವಾಗಿದೆ. ಮೂಲತಹ ಭೂವಿಜ್ಞಾನ ಸ್ನಾತಕೋತ್ತರ ಪದವಿಧರರಾಗಿ, ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸಿದ್ದ ಅವರು ತಮ್ಮ ಕನ್ನಡ ಸಾಹಿತ್ಯ ಕೃಷಿಯಿಂದಾಗಿ ರಾಜ್ಯ ಪ್ರಶಸ್ತಿ, ಕೇಂದ್ರ ಅಕಾಡೆಮಿ ಸೇರಿದಂತೆ ಅನೇಕ ಸಾಹಿತ್ಯಿಕ

ಪ್ರಶಸ್ತಿಗೆ ಭಾಜನರಾಗಿದ್ದ ಅವರ ಆತ್ಮಕ್ಕೆ ದೇವರು  ಚಿರಶಾಂತಿಯನ್ನು ನೀಡಲಿ, ಅವರ ಕುಟುಂಬದ ಸದಸ್ಯರಿಗೆ ಆಘಾತ ನಿರ್ವಹಿಸುವ ಶಕ್ತಿ ನೀಡಲಿ  ಎಂದು ರಾಜ್ಯದ ಗಣಿ ಭೂವಿಜ್ಞಾನ ಇಲಾಖೆ ಸಚಿವರಾದ ಸಿ.ಸಿ. ಪಾಟೀಲ ತಿಳಿಸಿದ್ದಾರೆ.